# 4 ದಿನ ಬಳಿಕ ಇಂದಿನಿಂದ ಅಧಿವೇಶನ

## ಸೀಡಿ ವಿವಾದ ಪ್ರಸ್ತಾಪ ಸಾಧ್ಯತೆ | ವಾಕ್ಸಮರಕ್ಕೆ ಬಿಜೆಪಿ-ಕಾಂಗ್ರೆಸ್ ಸಜ್ಜು?

• ಕನ್ನಡಪ್ರಭ ವಾರ್ತೆ ಬೆಂಗಳೂರು



ನಾಲ್ಕು ದಿನಗಳ ರಜೆ ಬಳಿಕ ಸೋಮವಾರದಿಂದ ವಿಧಾನಮಂಡಲದ ಉಭಯ ಸದನಗಳ ಅಧಿವೇಶನ ಪುನಾರಂಭವಾಗಲಿದ್ದು, ಸಿಡಿ ವಿವಾದ ಪ್ರಸ್ತಾಪವಾಗುವ ಸಾಧ್ಯತೆಯಿದೆ.

ಆಡಳಿತಾರೂಢ ಬಿಜೆಪಿ ಮತ್ತು ಪ್ರಮುಖ ಪ್ರತಿಪಕ್ಷ ಕಾಂಗ್ರೆಸ್ ನಡುವೆ ವಾಕ್ಸಮರ ನಡೆಯುವ ನಿರೀಕ್ಷೆಯಿದ್ದು, ಬೆಳಗ್ಗೆ ಕಲಾಪ ಆರಂಭವಾಗುವ ಮೊದಲು ಪ್ರತಿಪಕ್ಷ ಕಾಂಗ್ರೆಸ್ ನಾಯಕರು ಸಭೆ ಸೇರಿ ಮುಂದಿನ ಹೆಜ್ಜೆ ನಿರ್ಧರಿಸಲಿದ್ದಾರೆ ಎನ್ನಲಾಗಿದೆ.

ಈ ನಡುವೆ ಸಿ.ಡಿ. ಪ್ರಕರಣವನ್ನು ಸದನದಲ್ಲಿ ಪ್ರಸ್ತಾಪಿಸುವುದಾಗಿ ವಿಪಕ್ಷ ನಾಯಕ ಸಿದ್ದರಾಮಯ್ಯ ಅವರು ಭಾನುವಾರ ತಿಳಿಸಿದ್ದಾರೆ. ಅವರ ಹೇಳಿಕೆಗೆ ಪ್ರತಿಕ್ರಿಯಿಸಿರುವ ಸಿಎಂ ಬಿ.ಎಸ್.ಯಡಿಯೂರಪ್ಪ, ಅವರು ಏನು ಬೇಕಾದರೂ ಪ್ರಸ್ತಾಪ ಮಾಡಲಿ. ಅದನ್ನು ನಾನು ಸ್ವಾಗತಿಸುತ್ತೇನೆ ಎಂದಿದ್ದಾರೆ.

ನಗರದಲ್ಲಿ ಮಾತನಾಡಿದ ಯಡಿಯೂರಪ್ಪ, ವಿರೋಧ ಪಕ್ಷದ ನಾಯಕರಾಗಿ ಸಿದ್ದರಾಮಯ್ಯನವರಿಗೆ ಯಾವುದೇ ವಿಷಯ ಪ್ರಸ್ತಾಪ ಮಾಡಲು ಸರ್ವ ಸ್ವಾತಂತ್ರ್ಯವಿದೆ. ವಿರೋಧ ಪಕ್ಷದ ನಾಯಕರಾಗಿ ಅವರು ಪ್ರಸ್ತಾಪ ಮಾಡೋದು ಅಪರಾಧ ಅಲ್ಲ. ಅದು ಸರ್ಕಾರದ ಗಮನಕ್ಕೆ ತರಬೇಕು. ಆದರಿಂದ ನಮ್ಮ ಮಂತ್ರಿಗಳು ಎಚ್ಚರಿಕೆಯಿಂದ ಕೆಲಸ ಮಾಡಲು ಅನುಕೂಲ ಆಗುತ್ತದೆ. ಸಿದ್ದರಾಮಯ್ಯ ಯಾವುದೇ ಪ್ರಸ್ತಾಪ ಮಾಡಿ ಏನು ಸಲಹೆ ಕೊಡುತ್ತಾರೋ ಅದನ್ನು ನಾನು ಸ್ವೀಕಾರ ಮಾಡಲು ಸಿದ್ಧನಿದ್ದೇನೆ ಎಂದರು.

**ಯತ್ನಾಳ ಧರಣಿ ಸಂಭವ:** ಇದೇ ವೇಳೆ ಪಂಚಮಸಾಲಿ ಸಮುದಾಯಕ್ಕೆ 2ಎ ಮೀಸಲಾತಿಗೆ ಆಗ್ರಹಿಸಿ ಸೋಮವಾರ ಸದನದಲ್ಲಿ ಆಡಳಿತಾರೂಢ ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಧರಣಿ ನಡೆಸುವುದಾಗಿ ಹೇಳಿರುವುದು ಸರ್ಕಾರಕ್ಕೆ ಮುಜುಗರ ಉಂಟು ಮಾಡಬಹುದು.